## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 203 (190) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 09-12-2025 |

*****

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಯಾವಾಗ ಜವಳಿ ನೀತಿಯನ್ನು ರಚಿಸಲಾಗಿತ್ತು; ರಾಜ್ಯಕ್ಕೆ ಹೊಸ ಜವಳಿ ನೀತಿಯನ್ನು ರಚಿಸಲು ಸರ್ಕಾರ ಯೋಜಿಸಿದೆಯೇ; ಹಾಗಿದ್ದಲ್ಲಿ, ಹೊಸ ಜವಳಿ ನೀತಿಯನ್ನು ಯಾವಾಗ ಜಾರಿಗೆ ತರಲಾಗುವುದು; | ರಾಜ್ಯದಲ್ಲಿ ಈ ಕೆಳಕಂಡಂತೆ ಜವಳಿ ನೀತಿಯನ್ನು ಘೋಷಿಸಲಾಗಿರುತ್ತದೆ.<br>1. ಸುವರ್ಣವಸ್ತ್ರ ನೀತಿ- 2008-13 ದಿನಾಂಕ:01.10.2008 ರಂದು ಜಾರಿಗೊಳಿಸಲಾಗಿರುತ್ತದೆ.<br>2. ನೂತನ ಜವಳಿ ನೀತಿ – 2013-18 ದಿನಾಂಕ:01.11.2013 ರಂದು ಜಾರಿಗೊಳಿಸಲಾಗಿರುತ್ತದೆ.<br>3. ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ- 2019-24. ದಿನಾಂಕ:04.11.2019 ರಂದು ಜಾರಿಗೊಳಿಸಲಾಗಿರುತ್ತದೆ.<br><br>ಹೌದು.<br><br>2024-25 ಮತ್ತು 2025-26ನೇ ಸಾಲಿನ ಆಯವ್ಯಯ ಕಂಡಿಕೆಗೆ ಸಂಬಂಧಿಸಿದಂತೆ, New Textile and Apparel Policy 2025-30 ನ್ನು ರೂಪಿಸಲು ಕರಡು ಸಿದ್ಧಪಡಿಸಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ. |
| ಆ) | ಜವಳಿ, ಕಬ್ಬು ಮತ್ತು ಸಕ್ಕರೆ ಉತ್ಪಾದನೆ ಕ್ಷೇತ್ರದಲ್ಲಿ ತಂತ್ರಜ್ಞಾನ ನವೀಕರಣಕ್ಕಾಗಿ ಸರ್ಕಾರದ ವತಿಯಿಂದ ಕೈಗೊಳ್ಳಲಾದ ಕ್ರಮಗಳೇನು; | ಜವಳಿ ವಲಯಕ್ಕೆ ಸಂಬಂಧಿಸಿದಂತೆ, ಉತ್ಪಾದನೆ ಕ್ಷೇತ್ರದಲ್ಲಿ ತಂತ್ರಜ್ಞಾನವನ್ನು ನವೀಕರಿಸುವ ಘಟಕಗಳಿಗೆ ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ 2019-24 ರಡಿ ರಿಯಾಯಿತಿ ಮತ್ತು ಪ್ರೋತ್ಸಾಹನಗಳನ್ನು ನೀಡಲಾಗುತ್ತಿದೆ.<br><br>ಕಬ್ಬು ಬೆಳೆ ಮತ್ತು ಸಕ್ಕರೆ ಉದ್ದಿಮೆಗೆ ಸಂಬಂಧಿಸಿದಂತೆ ಸಂಶೋಧನಾ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರದಿಂದ ಬೆಳಗಾವಿಯಲ್ಲಿ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ಸ್ಥಾಪಿಸಲಾಗಿರುತ್ತದೆ.<br><br>ಸದರಿ ಸಂಸ್ಥೆಯಲ್ಲಿ ಕಬ್ಬು ಬೆಳೆ ಮತ್ತು ಸಕ್ಕರೆ ಉದ್ದಿಮೆಗೆ ಸಂಬಂಧಿಸಿದಂತೆ ನಿಯಮಿತವಾಗಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದರಂತೆ, ಸಕ್ಕರೆ ಉದ್ದಿಮೆಗೆ ನುರಿತ ತಂತ್ರಜ್ಞರನ್ನು ಒದಗಿಸಲು ಸಂಸ್ಥೆಯಿಂದ ಬಿ.ಎಸ್ಸಿ. (ಸಕ್ಕರೆ ವಿಜ್ಞಾನ ಮತ್ತು ತಂತ್ರಜ್ಞಾನ) ಪದವಿ, ಎಂ.ಎಸ್ಸಿ. (ಮದ್ಯಸಾರ ತಂತ್ರಜ್ಞಾನ) ಮತ್ತು ಎಂ.ಎಸ್ಸಿ. (ಸಕ್ಕರೆ ತಂತ್ರಜ್ಞಾನ) ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲಾಗಿರುತ್ತದೆ. |

...2

| | | |
|---|---|---|
| | | ಉತ್ತಮ ಇಳುವರಿ ಹೊಂದಿದ ಕಬ್ಬಿನ ತಳಿಗಳನ್ನು ಅಂಗಾಂಶ ಕೃಷಿ ಮೂಲಕ ಅಭಿವೃದ್ಧಿಪಡಿಸಿ ರೈತರಿಗೆ ನೀಡಲಾಗುತ್ತಿದೆ ಮತ್ತು ಸಾಮಯವ ಕೃಷಿ ಅಭಿವೃದ್ಧಿಪಡಿಸಲು ಸಂಸ್ಥೆಯಿಂದ ಜೈವಿಕ ಗೊಬ್ಬರಗಳನ್ನು ಉತ್ಪಾದಿಸಿ ರೈತರಿಗೆ ನೀಡಲಾಗುತ್ತಿದೆ. ಮುಂದುವರೆದು, ಕಬ್ಬು ಕೃಷಿಗೆ ಸಂಬಂಧಿಸಿದಂತೆ ಕೃಷಿ ಇಲಾಖೆಯ ಸಹಯೋಗದೊಂದಿಗೆ ಕೃತಕ ಬುದ್ಧಿ ಮತ್ತೆ (Artificial Intelligence) ತಂತ್ರಜ್ಞಾನವನ್ನು ಪ್ರಾಯೋಗಿಕವಾಗಿ ಅಳವಡಿಸುವ ಕ್ರಮ ಜರುಗಿಸಲಾಗುತ್ತಿದೆ. |
| ಇ) | ರಾಜ್ಯದ ಜವಳಿ ನೇಕಾರರ ವಿಶೇಷವಾಗಿ ಉತ್ತರ ಕರ್ನಾಟಕ ಭಾಗದ ಜವಳಿ ನೇಕಾರರ ಸಮಸ್ಯೆಗಳೇನು ಮತ್ತು ಈ ಸಮಸ್ಯೆಗಳಿಗೆ ಸರ್ಕಾರದ ವತಿಯಿಂದ ಕೈಗೊಂಡಿರುವ ಪರಿಹಾರವೇನು; | ಜವಳಿ ಇಲಾಖೆಗೆ ಈ ಕುರಿತು ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಈ) | ರಾಜ್ಯದಲ್ಲಿ ಜವಳಿ ಕಾರ್ಖಾನೆಗಳಿಗೆ ಸರ್ಕಾರದ ವತಿಯಿಂದ ವಿದ್ಯುತ್ ಸಬ್ಸಿಡಿ ನೀಡಲಾಗುತ್ತಿದೆಯೇ; ಇಲ್ಲವಾದಲ್ಲಿ, ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಹೌದು.<br>• ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ-2019-24 ರಡಿ ಜವಳಿ ಹಾಗೂ ಸಿದ್ಧ ಉಡುಪು ಘಟಕಗಳಿಗೆ ಪ್ರತಿ ಯುನಿಟ್‌ಗೆ ರೂ.1.00 ರಿಂದ ರೂ.2.00 ರಂತೆ ವಿದ್ಯುತ್ ಶಕ್ತಿ ಮರುಪಾವತಿ ಸಹಾಯಧನವನ್ನು ನೀಡಲಾಗುತ್ತಿದೆ.<br>• 01 ರಿಂದ 10 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯ ಬಿಲ್ ನೀಡಲಾಗುತ್ತಿದೆ.<br>• 10.01 ರಿಂದ 20 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಬಳಸಿದ ಒಟ್ಟು ಯೂನಿಟ್‌ಗಳಿಗೆ ಪ್ರತಿ ಯೂನಿಟ್‌ಗೆ ರೂ.1.25 ರಂತೆ ವಿದ್ಯುತ್ ಶುಲ್ಕವನ್ನು (Energy Charges) ಘಟಕದವರು ಪಾವತಿಸುವುದು. ಬಾಕಿ ಉಳಿಯುವ ವಿದ್ಯುತ್ ಶುಲ್ಕದ ಮೊತ್ತವನ್ನು ಮಾತ್ರ ಸರ್ಕಾರದ ಬೊಕ್ಕಸದಿಂದ ಭರಿಸಲಾಗುತ್ತಿದೆ. |

**ಸಂಖ್ಯೆ: CI 261 JAKE 2025**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು